# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಕೆ.ಜಿ.ಜಗದೀಶ್, ಸಹಾಯಕ ಯೋಜನಾಧಿಕಾರಿ-2, ಬೆಂಗಳೂರು ನಗರ ಜಿಲ್ಲಾ ಪಂಚಾಯತಿ, ಬೆಂಗಳೂರು ಇವರ ವಿರುದ್ಧ ಇಲಾಖಾ ವಿಚಾರಣೆ – ವಿಚಾರಣಾಧಿಕಾರಿಗಳನ್ನು ನೇಮಿಸುವ ಬಗ್ಗೆ – ಆದೇಶ.

ಓದಲಾಗಿದೆ.

1. ಕುಮಾರಿ ಲಕ್ಷ್ಮೀ ಆರ್. ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಜಿಲ್ಲಾ ಪಂಚಾಯತ್ ಶಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು ಇವರ ದೂರು ಮನವಿಯ ದಿನಾಂಕ 28.12.2015.

2. ದೋಷಾರೋಪಣಾ ಪಟ್ಟಿಯೊಂದಿಗೆ ಜಾರಿ ಮಾಡಿದ ಕಾರಣ ಕೇಳುವ ನೋಟೀಸ್ ಸಂಖ್ಯೆ. ಗ್ರಾಅಪ 43 ಕೆಎಸ್‌ಎಸ್ 2016 ದಿನಾಂಕ. 14.12.2016.

3. ಶ್ರೀ ಕೆ.ಜಿ.ಜಗದೀಶ್, ಇವರು ಸಲ್ಲಿಸಿರುವ ಲಿಖಿತ ಹೇಳಿಕೆ ದಿನಾಂಕ. 15.02.2017.

*****

ಪ್ರಸ್ತಾವನೆ:

ಕುಮಾರಿ ಲಕ್ಷ್ಮೀ ಆರ್. ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಜಿಲ್ಲಾ ಪಂಚಾಯತ್ ಶಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು ಇವರು ಶ್ರೀ ಕೆ.ಜಿ.ಜಗದೀಶ್, ಸಹಾಯಕ ಯೋಜನಾಧಿಕಾರಿ, ಬೆಂಗಳೂರು ನಗರ ಜಿಲ್ಲಾ ಪಂಚಾಯತಿ ಇವರು ದಿನನಿತ್ಯದ ಕೆಲಸಗಳಿಗೆ ಅಡ್ಡಿಯುಂಟು ಮಾಡುವುದು, ದೈಹಿಕವಾಗಿ ಹಲ್ಲೆ ಮಾಡಿರುವುದು, ಜಾತಿ ನಿಂದನೆ, ಜೀವ ಬೆದರಿಕೆ, ಸಾರ್ವಜನಿಕ ಸ್ಥಳಗಳಲ್ಲಿ ಮತ್ತು ಕಚೇರಿ ಆವರಣದಲ್ಲಿ ವೈಯಕ್ತಿಕ ವಿಚಾರಗಳನ್ನು ಉಲ್ಲೇಖಿಸಿ ಮಾತನಾಡಿರುತ್ತಾರೆಂದು ಆರೋಪಿಸುತ್ತಾ ಸದರಿ ಅಧಿಕಾರಿಯ ವಿರುದ್ಧ ಸೂಕ್ತ ಶಿಸ್ತು ಕ್ರಮ ಜರುಗಿಸುವಂತೆ ಕೋರಿ ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ 28.12.2015ರಂದು ದೂರನ್ನು ಸಲ್ಲಿಸಿರುತ್ತಾರೆ. ಸದರಿ ದೂರಿನ ಬಗ್ಗೆ ಪರಿಶೀಲಿಸಿ ವರದಿ ನೀಡಲು ರಚಿಸಲಾಗಿದ್ದ ಮಹಿಳಾ ಅಧಿಕಾರಿ / ನೌಕರರ ದೂರುಗಳ ಪರಿಶೀಲನಾ ಸಮಿತಿಯು ನೀಡಿದ್ದ ಶಿಫಾರಸ್ಸನ್ನು ಹಾಗೂ ಆಪಾದಿತ ಅಧಿಕಾರಿಯು ಸಲ್ಲಿಸಿದ್ದ ಲಿಖಿತ ಹೇಳಿಕೆಯನ್ನು ಸರ್ಕಾರವು ಪರಿಶೀಲಿಸಿ, ಶ್ರೀ ಕೆ.ಜಿ.ಜಗದೀಶ್, ಸಹಾಯಕ ಯೋಜನಾಧಿಕಾರಿ ಇವರು ಕುಮಾರಿ ಲಕ್ಷ್ಮೀ ಆರ್. ಪಂಚಾಯತ್ ಅಭಿವೃದ್ಧಿ ಅಧಿಕಾರಿ, ದೈಹಿಕ ಹಲ್ಲೆ ಮಾಡಿರುವುದು ಮೇಲ್ನೋಟಕ್ಕೆ ಕಂಡುಬಂದಿದ್ದರಿಂದ ಹಾಗೂ ಇದೊಂದು ಗಂಭೀರ ಸ್ವರೂಪದ ದುರ್ನಡತೆಯಾಗಿದ್ದು, ಸದರಿಯವರ ವಿರುದ್ಧದ ಆರೋಪಗಳ ಬಗ್ಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11ರಂತೆ ಇಲಾಖಾ ವಿಚಾರಣೆ ಜರುಗಿಸಲು ತೀರ್ಮಾನಿಸಿ ಸದರಿಯವರಿಗೆ ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ದಿನಾಂಕ 14.12.2016ರ ಕಾರಣ ಕೇಳುವ ನೋಟೀಸಿನೊಂದಿಗೆ ದೋಷಾರೋಪಣಾ ಪಟ್ಟಿಯನ್ನು ಜಾರಿಮಾಡಲಾಗಿತ್ತು.

ಸರ್ಕಾರದ ಕಾರಣ ಕೇಳುವ ನೋಟೀಸಿಗೆ ಪ್ರತಿಯಾಗಿ ಆಪಾದಿತ ಅಧಿಕಾರಿಯು ಮೇಲೆ ಕ್ರಮ ಸಂಖ್ಯೆ (3)ರಂತೆ ಸಲ್ಲಿಸಿರುವ ಲಿಖಿತ ಹೇಳಿಕೆಯಲ್ಲಿ ತಮ್ಮ ವಿರುದ್ಧ ಮಾಡಲಾಗಿರುವ ಆರೋಪಗಳನ್ನು ಅಲ್ಲಗಳೆದಿರುತ್ತಾರೆ. ಇದನ್ನು ಒಪ್ಪದೆ, ಶ್ರೀ ಕೆ.ಜಿ.ಜಗದೀಶ್, ಸಹಾಯಕ ಯೋಜನಾಧಿಕಾರಿ ಇವರು ಕುಮಾರಿ ಲಕ್ಷ್ಮೀ ಆರ್. ಇವರ ಮೇಲೆ ದೈಹಿಕ ಹಲ್ಲೆ ಮಾಡಿರುವುದು ಗಂಭೀರ ಸ್ವರೂಪದ ಅಪರಾಧಿಕ ದುರ್ನಡತೆಯಾಗಿದ್ದು, ಇವರು ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ದುರ್ನಡತೆ ಎಸಗಿ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966ನ್ನು ಉಲ್ಲಂಘಿಸಿರುವುದರಿಂದ ಸದರಿ ಆರೋಪದ ಸತ್ಯಾಸತ್ಯತೆಯನ್ನು ತಿಳಿಯುವ ಸಲುವಾಗಿ ವಿವರವಾದ ಇಲಾಖಾ ವಿಚಾರಣೆಯನ್ನು ನಡೆಸುವುದು ಸೂಕ್ತವೆಂದು ಸರ್ಕಾರವು ನಿರ್ಧರಿಸಿದೆ. ಆದ್ದರಿಂದ ಈ ಕೆಳಕಂಡ ಆದೇಶ.

**<u>ಆದೇಶ ಸಂಖ್ಯೆ : ಗ್ರಾಅಪ 43 ಕೆಎಸ್ಎಸ್ 2016 ಬೆಂಗಳೂರು, ದಿನಾಂಕ. 22.03.2017</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರವು ಶ್ರೀ ಕೆ.ಜಿ.ಜಗದೀಶ್, ಅಂದಿನ ಸಹಾಯಕ ಯೋಜನಾಧಿಕಾರಿ-2, ಬೆಂಗಳೂರು ನಗರ ಜಿಲ್ಲಾ ಪಂಚಾಯತಿ, ಬೆಂಗಳೂರು ಇವರ ವಿರುದ್ಧದ ಆರೋಪಗಳ ಬಗ್ಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11ರನ್ವಯ ವಿವರವಾದ ಇಲಾಖಾ ವಿಚಾರಣೆಯನ್ನು ನಡೆಸಲು ಶ್ರೀ ಎ. ಕೃಷ್ಣಪ್ಪ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಬೆಂಗಳೂರು ಇವರನ್ನು ಇಲಾಖಾ ವಿಚಾರಣಾಧಿಕಾರಿಯನ್ನಾಗಿ ಮತ್ತು ಸರ್ಕಾರದ ಅಧೀನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಸೇವೆಗಳು-ಬಿ&ಸಿ ಇವರನ್ನು ಮಂಡನಾಧಿಕಾರಿಯನ್ನಾಗಿ ನೇಮಿಸಿ ಆದೇಶಿಸಿದೆ.

ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣೆಯನ್ನು ಆದಷ್ಟು ತ್ವರಿತವಾಗಿ ಕೈಗೊಂಡು, ಸದರಿ ನಿಯಮಗಳ ನಿಯಮ 11(23) ರಂತೆ ವರದಿಯನ್ನು ಮೂರು ತಿಂಗಳೊಳಗಾಗಿ ಸರ್ಕಾರಕ್ಕೆ ಸಲ್ಲಿಸುವುದು.

ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ ನಂತರ ನಿಯಮಾನುಸಾರ ನಿಗದಿತ ಸಂಭಾವನೆಯನ್ನು ಮಂಜೂರು ಮಾಡಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

22/03/2017

(ಎಸ್.ರಂಗನಗೌಡ),
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಬಿ&ಸಿ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು (ಲೆಕ್ಕಪತ್ರ 1& 2) / (ಆಡಿಟ್)
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಬೆಂಗಳೂರು ನಗರ ಜಿಲ್ಲಾ ಪಂಚಾಯತ್, ಬೆಂಗಳೂರು.
3. ಶ್ರೀ ಎ.ಕೃಷ್ಣಪ್ಪ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ನಂ.1242, 4ನೇ ಮುಖ್ಯ ರಸ್ತೆ, 8ನೇ ಕ್ರಾಸ್, ಚಂದ್ರಲೇಔಟ್, ಬೆಂಗಳೂರು - 560 040.

4. ಮಾನ್ಯ ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
5. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಜಂಟಿ ಕಾರ್ಯದರ್ಶಿ (ಆಡಳಿತ) ಇವರುಗಳ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರಿಗೆ.
6. ಮೇಲ್ವಿಚಾರಕರು, ಗಣಕಯಂತ್ರ ಕೋಶ, ಗ್ರಾ.ಅ.ಪಂ.ಇಲಾಖೆ, ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು
7. ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.